# ವಾರ್ಡ್ ಸಭೆ ಸಂಖ್ಯೆ.32

ದಿನಾಂಕ:.18.04.2022 ರಂದು ಸಮಯ 11:00 ಗಂಟೆಗೆ ವಾರ್ಡ್.ಸಂಖ್ಯೆ.44 ಮಾರಪ್ಪನಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಮಾನ್ಯ ನೋಡಲ್ ಅಧಿಕಾರಿ (ಅಧ್ಯಕ್ಷರು) ರವರ ಅಧ್ಯಕ್ಷತೆಯಲ್ಲಿ ಕರೆಯಲಾಗಿತ್ತು.

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳು

1. ಶ್ರೀ ಎಲ್ ವೆಂಕಟೇಶ್ ನೋಡಲ್ ಅಧಿಕಾರಿ ರವರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. (ಅಧ್ಯಕ್ಷರು)
2. ಶ್ರೀ ಧನಂಜಯ ಜಿ.ಟಿ ಸಹಾಯಕ ಅಭಿಯಂತರರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. (ಕಾರ್ಯದರ್ಶಿ)
3. ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು.
4. ಶ್ರೀಮತಿ ಪ್ರೇಮ ಸದಸ್ಯರು.
5. ಶ್ರೀ ನಂಜೇಗೌಡ ಬಿ.ವಿ ಸದಸ್ಯರು.
6. ಶ್ರೀ ರಾಜೇಶ್ ಸದಸ್ಯರು.
7. ಶ್ರೀ ಗೋಪಿ ಸದಸ್ಯರು.
8. ಶ್ರೀ ಶಶಿಕುಮಾರ್ ಎಸ್.ಆರ್ ಆರೋಗ್ಯ ವೈಧ್ಯಾಧಿಕಾರಿಗಳು ಶಂಕರನಗರ ಪ್ರಾಥಮಿಕ ಆರೋಗ್ಯ ಕೇಂದ್ರ.
9. ಶ್ರೀ ಪ್ರದೀಪ್‌ಕುಮಾರ್ ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
10. ಶ್ರೀ ಛಾಯಪತಿ ಎಂ ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
11. ಶ್ರೀ ಜಿ.ಕೆ ವೆಂಕಟೇಶಯ್ಯ, ಕೆಲಸ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
12. ಶ್ರೀ ಹೇಮಂತ್ (ಬಿ.ಡಬ್ಲ್ಯೂ.ಎಸ್.ಎಸ್.ಬಿ), ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
13. ಶ್ರೀ ದಿನೇಶ್ ಕುಮಾರ್ ಸಹಾಯಕ ಅಭಿಯಂತರರು (ಬೆಸ್ಕಾಂ) ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
14. ಶ್ರೀ ಮಹದೇವಾ ಬೀದಿ ದೀಪ ಗುತ್ತಿಗೆದಾರರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
15. ಶ್ರೀ ರಂಜಿತ್ ಮಾರ್ಷಲ್ ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.

ಶ್ರೀ ಧನಂಜಯ ಜಿ.ಟಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಸದಸ್ಯರನ್ನು, ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಲಾಯಿತು.

| ಕ್ರ. ಸಂ | ವಿವರಣೆ | ಕ್ರಮ |
|---|---|---|
| 1. | ಕಾರ್ಯದರ್ಶಿಗಳು ಹಿಂದಿನ ಸಭೆಯ ನಡವಳಿಗಳನ್ನು ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ, ಅಧಿಕಾರಿಗಳಿಗೆ ಓದಿ ತಿಳಿಸಿದರು. | - |
| 2. | ಕಾರ್ಯದರ್ಶಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಮೊದಲ ಆದ್ಯತೆ ನೀಡಿ ಸಮಸ್ಯೆಯನ್ನು ತಿಳಿಸುವಂತೆ ಸಾರ್ವಜನಿಕರನ್ನು ಕೋರಿದರು. | - |
| 3. | ಶ್ರೀ ನಂಜೇಗೌಡ ಬಿ.ವಿ ಸದಸ್ಯರು ರವರು ಕೆ.ಎಚ್.ಬಿ ಕಾಲೋನಿಯಲ್ಲಿ ಒಣ ತ್ಯಾಜ್ಯವನ್ನು ಸಂಗ್ರಹಿಸುವ ವಾಹನಗಳು ಬರುತ್ತಿರುವದಿಲ್ಲ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸಂಬಂಧಪಟ್ಟವರಿಗೆ ಸಮಸ್ಯೆ ಪರಿಹರಿಸಲು ಸೂಚಿಸಿದರು. | ಘನತ್ಯಾಜ್ಯ ಇಲಾಖೆ |
| 4. | ಶ್ರೀ ರಾಜೇಶ್ ಸದಸ್ಯರು ರವರು ಶಂಕರನಗರ ವ್ಯಾಪ್ತಿಯಲ್ಲಿ ಕಸ ಸಂಗ್ರಣ ವಾಹನಗಳು ಸಮಯಕ್ಕೆ ಸರಿಯಾಗಿ ಬರುತ್ತಿರುವುದಿಲ್ಲ ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸಮಸ್ಯೆ ಪರಿಹರಿಸಲು ಸೂಚಿಸಿದರು. | ಘನತ್ಯಾಜ್ಯ ಇಲಾಖೆ |
| 5. | ಶ್ರೀ ಜಯಪಾಲ್ ಸದಸ್ಯರು ರವರು ಗೌತಮನಗರ ವ್ಯಾಪಿಯಲ್ಲಿ ಫಾಗಿಂಗ್ ಮಾಡಿಸಲು ಕೋರಿದರು. ಇದಕ್ಕೆ ಶ್ರೀ ಪ್ರದೀಪ್ ಹಿರಿಯ ಆರೋಗ್ಯ ಪರಿವೀಕ್ಷಕರು ಫಾಗಿಂಗ್ ಮಾಡಿಸಿಕೊಡುತ್ತೇನೆ ಎಂದು ತಿಳಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು |
| 6. | ಶ್ರೀ ಜಯಪಾಲ್ ಸದಸ್ಯರು ರವರು ಗೌತಮನಗರದ ಆರ್ಚ್ ಹತ್ತಿರ ವಿದ್ಯುತ್ ಕಂಬ ಬಾಗಿರುತ್ತದೆ ಅದನ್ನು ಸರಿಪಡಿಸುವಂತೆ ಕೋರಿದರು. ಇದಕ್ಕೆ ಶ್ರೀ ದಿನೇಶ್‌ಕುಮಾರ್ ಸಹಾಯಕ ಅಭಿಯಂತರರು ಸರಿಪಡಿಸುತ್ತೇವೆ ಎಂದು ಸಭೆಗೆ ತಿಳಿಸಿದರು. | ಬೆಸ್ಕಾಂ ಇಲಾಖೆ |
| 7. | ಶ್ರೀ ಜಯಪಾಲ್ ಸದಸ್ಯರು ರವರು ಗೌತಮನಗರ ವ್ಯಾಪ್ತಿಯಲ್ಲಿ ಮನೆಗಳಿಗೆ ನೀರಿನ ಬಿಲ್ಲಿನ ಮೊತ್ತ ರೂ.100 ಗಳು ಬರುತ್ತಿತ್ತು ಆದರೆ ಈಗ ರೂ.5000 ಕ್ಕಿಂತ ಹೆಚ್ಚಿನ ಮೊತ್ತವನ್ನು ಪಾವತಿಸಲು ಬಿಲ್ಲುಗಳನ್ನು ನೀಡಿರುತ್ತೀರಿ ಯಾವ ಕಾರಣಕ್ಕಾಗಿ ಮಾಹಿತಿ ನೀಡಿ ಎಂದು ಕೋರಿದರು. ಇದಕ್ಕೆ ಶ್ರೀ ಹೇಮಂತ್‌ರವರು ಮೇಲಾಧಿಕಾರಿಗಳೊಂದಿಗೆ ಮಾಹಿತಿಯನ್ನು ಪಡೆದು ತಿಳಿಸುತ್ತೇನೆ ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 8. | ಕಾರ್ಯದಶಿಗಳು ಮಾರ್ಷಲ್ ರವರಿಗೆ ಕೃಷ್ಣಾನಂದನಗರದಲ್ಲಿ ಹೊಸದಾಗಿ ಬ್ಲಾಕ್ ಸ್ಪಾಟ್ ಉತ್ಪತ್ತಿಯಾಗಿರುತ್ತದೆ ಸದರಿ ಬ್ಲಾಕ್‌ಸ್ಪಾಟ್‌ಅನ್ನು ತೆರವುಗೊಳಿಸಲು ಸೂಚಿಸಿದರು. | - |

Scanned with CamScanner

| | | |
|---|---|---|
| 9. | ಶ್ರೀ ಜಯಪಾಲ್ ಸದಸ್ಯರು ರವರು ಗೌತಮನಗರ ಬೋರ್‌ವೆಲ್ ರಿಪೇರಿ ಹಾಗೂ ಪ್ಯಾನಲ್ ಬೋರ್ಡ್‌ಗಳ ದುರಸ್ಥಿಯನ್ನು ಮಾಡಿಸಿಕೊಡಲು ಕೋರಿದರು ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | – |
| 10. | ಶ್ರೀ ರಾಜೇಶ್ ಸದಸ್ಯರು ರವರು ಉಲ್ಲಾಸ್ ಚಿತ್ರಮಂದಿರ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರು ರಸ್ತೆ ಅಗೆತವನ್ನು ಮಾಡಿ ಸರಿಯಾಗಿ restoration ಮಾಡಿರುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಶ್ರೀ ಹೇಮಂತ್ ರವರು ಸರಿಯಾಗಿ restoration ಮಾಡಿಕೊಡುತ್ತೇವೆ ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 11. | ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು ರವರು ಕೊಳವೆ ಬಾವಿ ಪ್ಯಾನಲ್ ಬೋರ್ಡ್‌ಗಳನ್ನು ಸರಿಪಡಿಸಲು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 12. | ಶ್ರೀ ರಾಜೇಶ್ ಸದಸ್ಯರು ರವರು 1ನೇ ಅಡ್ಡರಸ್ತೆ ಶಂಕರನಗರ ವ್ಯಾಪ್ತಿಯಲ್ಲಿ ನೀರಿನ ಕೊರತೆ ಇದೆ ಎಂದು ತಿಳಿಸಿದರು. ಇದಕ್ಕೆ ಶ್ರೀ ಹೇಮಂತ್ ರವರು ಸಮಸ್ಯೆ ಪರಿಹರಿಸಲಾಗುವುದು ಎಂದು ತಿಳಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ |
| 13. | ಕಾರ್ಯದರ್ಶಿಗಳು ಅಂತಿಮವಾಗಿ ಸಭೆಗೆ ಹಾಜರಿದ್ದ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಮತ್ತು ಸಾರ್ವಜನಿಕರಿಗೆ ವಂದನೆಗಳು ಹೇಳುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು. | – |

ಕಾರ್ಯದರ್ಶಿ

19/4/22

ವಾರ್ಡ್ ಕಮಿಟಿ, ವಾರ್ಡ್.ಸಂಖ್ಯೆ.44
ಮಾರಪ್ಪನಪಾಳ್ಯ

Scanned with CamScanner